# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1482 |
| 2 | ಸದಸ್ಯರ ಹೆಸರು | : | ಶ್ರೀ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 24.09.2021. |
| 4 | ಉತ್ತರಿಸುವ ಸಚಿವರು | : | ಮಾನ್ಯ ಯೋಜನಾ ಸಚಿವರು,<br>ಯೋಜನೆ, ಕಾರ್ಯಕ್ರಮ ಸಂಯೋಜನೆ<br>ಮತ್ತು ಸಾಂಖ್ಯಿಕ ಇಲಾಖೆ. |

******

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ 2016-17 ರಿಂದ 2020-2021ರವರೆಗೆ ಪ್ರತಿಯೊಬ್ಬ ಮಾನ್ಯ ಶಾಸಕರು ಸೂಚಿಸಿದ ಕಾಮಗಾರಿಗಳಿಗೆ, ಸರ್ಕಾರದಿಂದ ಪ್ರತಿ ವರ್ಷ ಬಿಡುಗಡೆಯಾದ ಕಂತು ಮತ್ತು ಅನುದಾನ ವೆಷ್ಟು ಹಾಗೂ ಪ್ರತಿಯೊಬ್ಬ ಮಾನ್ಯ ಶಾಸಕರು ಸೂಚಿಸಿದ ಕಾಮಗಾರಿಗಳಿಗೆ ಯಾವ ವರ್ಷದಲ್ಲಿ ಎಷ್ಟು ಮೊತ್ತದ ಅನುದಾನವನ್ನು ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ಬಾಕಿ ಇದ್ದ ಅನುದಾನದಿಂದ ಬಳಸಿಕೊಳ್ಳಲು ಸೂಚಿಸಲಾಗಿತ್ತು. | ರಾಜ್ಯದಲ್ಲಿ, ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 2016-17 ರಿಂದ 2020-2021ರವರೆಗೆ ಪ್ರತಿಯೊಬ್ಬ ಮಾನ್ಯ ಶಾಸಕರು ಪ್ರಸ್ತಾಪಿಸುವ ಕಾಮಗಾರಿ/ಕ್ರಿಯಾ ಯೋಜನೆಗೆ ಜಿಲ್ಲಾಧಿಕಾರಿ ಮತ್ತು ಉಪವಿಭಾಗಾಧಿಕಾರಿಗಳ ಹಂತದಲ್ಲಿ ಅನುಮೋದನೆ ನೀಡಲಾಗುತ್ತಿದೆ.<br><br>2016-17ನೇ ಸಾಲಿನಿಂದ 2020-2021ನೇ ಸಾಲಿನವರೆಗೆ ಬಿಡುಗಡೆಯಾದ ಕಂತು ಮತ್ತು ಅನುದಾನ ವಿವರಗಳು ಕೆಳಕಂಡಂತಿದೆ:- |

| ಕ್ರ ಸಂ | ವರ್ಷ | ಬಿಡುಗಡೆಯಾದ ಕಂತುಗಳು (ತಲಾ ರೂ.50.00 ಲಕ್ಷಗಳು) | ಬಿಡುಗಡೆಯಾದ ಅನುದಾನ (ರೂ.ಕೋಟಿಗಳಲ್ಲಿ) |
|---|---|---|---|
| 1 | 2016-17 | 4 | 590.00 |
| 2 | 2017-18 | 4 | 623.00 |
| 3 | 2018-19 | 2 | 466.998 |
| 4 | 2019-20* | 4 | 296.06 |
| 5 | 2020-21 | 4 | 598.86 |

2018-19ನೇ ಸಾಲಿನಲ್ಲಿ ನಾಲ್ಕನೇ ಕಂತಿನ ಅನುದಾನದಲ್ಲಿ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ. ಈ ಸಾಲಿನಲ್ಲಿ ಬಂಡವಾಳ ವೆಚ್ಚದಡಿ ರೂ.127.69 ಕೋಟಿಗಳು ಬಿಡುಗಡೆಗೆ ಬಾಕಿಯಿದ್ದು, ಸದರಿ ಅನುದಾನವನ್ನು ಬಿಡುಗಡೆ ಮಾಡುವ ಸಂಬಂಧ ಆರ್ಥಿಕ ಇಲಾಖೆಯನ್ನು ಕೋರಲಾಗಿದ್ದು, ಆರ್ಥಿಕ ಇಲಾಖೆಯು ದಿನಾಂಕ:09.08.2021ರಲ್ಲಿ ಪ್ರಸಕ್ತ ಸಾಲಿನಲ್ಲಿ ಲಭ್ಯವಿರುವ ಅನುದಾನ ಪೂರ್ಣವಾಗಿ ವೆಚ್ಚವಾದ ನಂತರ ಬಿಡುಗಡೆಗೊಳಿಸಲಾಗುವುದೆಂದು ಹಿಂಬರಹ ನೀಡಿರುತ್ತದೆ. ಆದ್ದರಿಂದ, ಲಭ್ಯವಿರುವ ಅನುದಾನ ವೆಚ್ಚವಾದ ನಂತರ ಸದರಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತದೆ.

2019-20ನೇ ಸಾಲಿನಲ್ಲಿ ಎರಡು ಕಂತುಗಳು ಬಿಡುಗಡೆಯಾಗಿದ್ದು, ಬಾಕಿ ಇದ್ದ ರೂ.300.00 ಕೋಟಿ ಅನುದಾನವನ್ನು, 2020-21ನೇ ಸಾಲಿನಲ್ಲಿ ಎಲ್ಲಾ ಕ್ಷೇತ್ರಗಳಿಗೆ ಬಿಡುಗಡೆ ಮಾಡಲಾಗಿರುವ ಅನುದಾನದಲ್ಲಿ ರೂ.300.00 ಕೋಟಿಗಳನ್ನು 2019-20ನೇ ಸಾಲಿಗೆ ವರ್ಗಾಯಿಸಿಕೊಂಡು ವೆಚ್ಚ ಮಾಡಲು ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದು, ಈ ಸಂಬಂಧ ದಿನಾಂಕ:13.08.2021 ರಂದು ಸುತ್ತೋಲೆ ಹೊರಡಿಸಿ, ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

...2

| ಪ್ರಶ್ನೆ | | ಉತ್ತರ |
|---|---|---|
| (ಆ) | 2016-17 ರಿಂದ 2020-2021ರವರೆಗೆ ಪ್ರತಿಯೊಬ್ಬ ಮಾನ್ಯ ಶಾಸಕರು ಎಷ್ಟು ಮೊತ್ತದ ಕಾಮಗಾರಿಗಳನ್ನು ಸೂಚಿಸಿ, ಅನುದಾನ ಪಡೆಯಲು ಸರ್ಕಾರ ಆದೇಶಿಸಿತ್ತು? (ಪ್ರತಿ ವರ್ಷದ ವಿವರವನ್ನು ಪ್ರತ್ಯೇಕವಾಗಿ ನೀಡುವುದು). | ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಮಾರ್ಗಸೂಚಿ ಕಂಡಿಕೆ-1.3ರಲ್ಲಿರುವಂತೆ 2013-14ನೇ ಸಾಲಿನಿಂದ ಮಾನ್ಯ ಶಾಸಕರ ಅನುದಾನವನ್ನು ರೂ.1.00 ಕೋಟಿಗಳಿಂದ ರೂ.2.00 ಕೋಟಿಗಳಿಗೆ ಹೆಚ್ಚಿಸಲಾಗಿರುತ್ತದೆ.<br><br>2016-17ನೇ ಸಾಲಿನಿಂದ 2019-20ನೇ ಸಾಲಿನವರಗೆ ತಲಾ ರೂ.2.00 ಕೋಟಿಗಳನ್ನು ಬಿಡುಗಡೆಗೊಳಿಸಲಾಗುರುತ್ತದೆ.<br><br>ದಿನಾಂಕ:29.04.2021ರಲ್ಲಿ ಆರ್ಥಿಕ ಇಲಾಖೆಯು "2020-2021ನೇ ಸಾಲಿನಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಪ್ರತಿ ಕರ್ನಾಟಕ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ರೂ.1.00 ಕೋಟಿಗಳಿಗೆ ಮಿತಿಗೊಳಿಸಲಾಗಿದೆ. ಉಳಿದ ಸಾಲುಗಳಲ್ಲಿ ಸದರಿ ಆರ್ಥಿಕ ಸಾಲುಗಳಲ್ಲಿ ತಲಾ ರೂ.2.00 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. |

ಸಂಖ್ಯೆ: ಪಿಡಿಎಸ್ 94 ಕೆಎಲ್‌ಎಸ್ 2021

(ಮುನಿರತ್ನ)
ಸಚಿವರು
ಯೋಜನೆ,ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ